ಉದ್ಯೋಗ ಭರವಸೆ ಯೋಜನೆಯಲ್ಲಿ ಕ್ಷೇತ್ರ ಮಟ್ಟಕ್ಕೆ ಇಳಿಸುವುದು.

1558 - ಶ್ರೀ ಚಂದ್ರಶೇಖರ ನಾಯಕ್ (ಗೋಕಾಕ್) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಉದ್ಯೋಗ ಭರವಸೆ ಯೋಜನೆಯು ತಾಲ್ಲೂಕು ಮಟ್ಟಕ್ಕೆ ಸೀಮಿತವಾಗಿರುವುದರಿಂದ ಎರಡು ಅಥವಾ ಮೂರು ಕ್ಷೇತ್ರಗಳಿರುವ ತಾಲ್ಲೂಕುಗಳಿಗೆ ಅನುದಾನ ಕಡಿಮೆಯಾಗುತ್ತಿದೆ, ಎಂಬ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಕೇವಲ ಒಂದೇ ಕ್ಷೇತ್ರ ಇರುವ ತಾಲ್ಲೂಕು ಮತ್ತು ಹೆಚ್ಚು ತಾಲ್ಲೂಕುಗಳಿಂದ ಕ್ಷೇತ್ರಕ್ಕೆ ಇದರಿಂದ ಅಭಿವೃದ್ಧಿಯಡಿಯಲ್ಲಿ ತಾರತಮ್ಯವಾಗುವುದಿಲ್ಲವೆ?*

ಇ) *ಹಾಗಿದ್ದಲ್ಲಿ ಅದನ್ನು ಕ್ಷೇತ್ರ ಮಟ್ಟಕ್ಕೆ ಇಳಿಸುವ ವಿಚಾರ ಸರ್ಕಾರಕ್ಕಿದೆಯೇ?*

ಈ) *ಹಾಗಿದ್ದಲ್ಲಿ, ಎಂದಿನಿಂದ ಜಾರಿಗೆ ತರಲಾಗುವುದು?*

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) ಇಲ್ಲಾ.

ಆ) ಈ ಯೋಜನೆಯಡಿಯಲ್ಲಿ ಒಂದು ತಾಲ್ಲೂಕಿನ ಒಂದು ಘಟಕವನ್ನಾಗಿ ಮಾಡಿರುತ್ತಾರೆ. ಕ್ಷೇತ್ರವಾರು ಘಟಕವನ್ನಾಗಿ ಮಾಡಿಲ್ಲದೇ ಇರುವುದರಿಂದ ಮತ್ತು ಎಲ್ಲಾ ಕಾಮಗಾರಿಗಳನ್ನು ಬೇಡಿಕೆ ಆಧಾರದ ಮೇಲೆ ತೆಗೆದುಕೊಳ್ಳಬೇಕಾಗಿರುವುದರಿಂದ ಒಂದು ತಾಲ್ಲೂಕಿನಿಂದ ಮತ್ತೊಂದು ತಾಲ್ಲೂಕಿಗೆ ಹಣ ಬಿಡುಗಡೆಯಲ್ಲಿ ವ್ಯತ್ಯಾಸ ಇರುವುದಿಲ್ಲ.

ಇ) ಈ ಕಾರ್ಯಕ್ರಮವು ಕೇಂದ್ರ ಪುರಸ್ಕೃತ ಕಾರ್ಯಕ್ರಮವಾಗಿರುವ ಕಾರಣ ಕೇಂದ್ರ ಸರ್ಕಾರದ ಮಾರ್ಗಸೂಚಿಗಳ ಪ್ರಕಾರ ಕಾರ್ಯಗತ ಮಾಡಲಾಗುತ್ತಿದೆ. ಆದರಲ್ಲಿ ಕ್ಷೇತ್ರಮಟ್ಟಕ್ಕೆ ಇಳಿಸುವುದಕ್ಕೆ ಅವಕಾಶವಿರುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಬಡಜನರಿಗೆ ವಿತರಿಸುವ ಶೌಚಾಲಯದಲ್ಲಿ ನಡೆದಿರುವ ಅವ್ಯವಹಾರ.

1560 - ಶ್ರೀ ಜಯರಾಮಶೆಟ್ಟಿ (ಉಳ್ಳಾಲ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಮಂಗಳೂರು ತಾಲ್ಲೂಕು ವ್ಯಾಪ್ತಿಯಲ್ಲಿ ಬಡಜನರಿಗೆ ವಿತರಿಸುವ ಶೌಚಾಲಯದಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಅದರ ವಿವರಗಳೇನು?*